ಕ್ರ.ಸಂ	ಯೋಜನೆ	2005–06	2006–07
1	ರಾಜ್ಯ ಹೆದ್ದಾರಿ ನಿರ್ವಹಣೆ	1147.00	–
2	ಸೇತುವೆ ನಿರ್ಮಾಣ	107.00	–
3	ರಸ್ತೆ ಅಭಿವೃದ್ಧಿ	340.00	–
	ಒಟ್ಟು	1594.00	–

ಸಂತೇಮರಳ್ಳಿ ವಿಧಾನ ಸಭಾ ಕ್ಷೇತ್ರಕ್ಕೆ ಮಂಜೂರಾದ ಹಣ ವಿವಿಧ ಯೋಜನೆಗಾಗಿ ನೀಡಿದ ಅನುದಾನ;

ಕ್ರ.ಸಂ	ಯೋಜನೆ	2005–06	2006–07
1	ಸೇತುವೆ	45.00	–
2	ರಸ್ತೆ ಅಭಿವೃದ್ಧಿ	110.00	–
	ಒಟ್ಟು	155.00	–

332 (329) ಶ್ರೀ ಧ್ರುವನಾರಾಯಣ್ ಆರ್ (ಸಂತೇಮರಳ್ಳಿ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಅಕ್ರಮ ಮರಳು ದಂಧೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು;

ಆ) ಈ ಮರಳು ದಂಧೆಯಿಂದ ಅಂತರ್ಜಲದ ಮಟ್ಟ ಕುಸಿಯುತ್ತಿರುವುದರ ಬಗೆಗಿನ ವೈಜ್ಞಾನಿಕ ವರದಿ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಪರವಾನಿಗೆ ಇಲ್ಲದೆ ಅಕ್ರಮವಾಗಿ ಮರಳನ್ನು ಕಳ್ಳಸಾಗಾಣಿಕೆ ಮಾಡುತ್ತಿರುವ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ನಿಯಂತ್ರಣವೇನು;

ಈ) ಚಾಮರಾಜನಗರ ಜಿಲ್ಲೆಯಲ್ಲಿ ಪರವಾನಿಗೆ ಹೊಂದಿ ಮತ್ತು ಪರವಾನಿಗೆ ಹೊಂದಿಲ್ಲದೆ ಮರಳು ಸಾಗಾಣಿಕೆ ಮಾಡುತ್ತಿರುವವರ ಸಂಖ್ಯೆ ಎಷ್ಟು;

ಉ) ಪರವಾನಿಗೆ ಇಲ್ಲದೆ ಸಾಗಾಣಿಕೆ ಮಾಡುವವರ ವಿರುದ್ಧ ಸರ್ಕಾರ ಎಷ್ಟು ಪ್ರಮಾಣದಲ್ಲಿ ಕೇಸು ದಾಖಲಿಸಿದೆ;

ಊ) ದಂಡದ ರೂಪದಲ್ಲಿ ಸರ್ಕಾರಕ್ಕೆ ಬಂದಿರುವ ಹಣವೆಷ್ಟು?

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಗಳು):

ಅ) ಸರ್ಕಾರದ ಗಮನಕ್ಕೆ ಬಂದಿದೆ. ಅನಧಿಕೃತ ಮರಳು ಗಣಿಗಾರಿಕೆಯನ್ನು ನಿಯಂತ್ರಿಸುವ ನಿಟ್ಟಿನಲ್ಲಿ ರಾಜ್ಯಸರ್ಕಾರವು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ: CI.05.MMN 2005, ದಿ:6.8.2005ರಲ್ಲಿ ಜಿಲ್ಲಾಮಟ್ಟದ ಉಸ್ತುವಾರಿ ಸಮಿತಿಯನ್ನು ರಚಿಸಿದೆ. ಈ ಸಮಿತಿಯಲ್ಲಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪೊಲೀಸ್ ಅಧಿಕಾರಿಗಳು, ಪ್ರಾದೇಶಿಕ ಸಾರಿಗೆ ಅಧಿಕಾರಿ, ಸಂಬಂಧಪಟ್ಟ ತಹಸೀಲ್ದಾರ್ ಮತ್ತು ಜಿಲ್ಲೆಯ ಹಿರಿಯ ಭೂವಿಜ್ಞಾನಿ/ಉಪ ನಿರ್ದೇಶಕರು ಸದಸ್ಯರಾಗಿರುತ್ತಾರೆ. ಈ ಸಮಿತಿಯು ಜಿಲ್ಲೆಯಲ್ಲಿ ಅಧಿಕೃತ ಮರಳು ಗಣಿಗಾರಿಕೆ ಮಾಡುವ ಸಲುವಾಗಿ ಸ್ಥಳಗಳನ್ನು ಗುರ್ತಿಸಿ ಸದರಿ ಸ್ಥಳಗಳನ್ನು ಸರ್ಕಾರಿ ರಾಜ್ಯಪತ್ರದಲ್ಲಿ ಪ್ರಕಟಿಸಿ ಉಪ ವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿತವಾಗಿರುವ ಮರಳು ಹರಾಜು ಸಮಿತಿ ಮೂಲಕ ಬಹಿರಂಗ ಹರಾಜು ಮಾಡಿ ವಿಲೇವಾರಿ ಮಾಡುವುದು. ಮರಳು ಗಣಿಗಾರಿಕೆಯಿಂದ ಪರಿಸರಕ್ಕೆ ಅಥವಾ ಬೇರೆ ರೀತಿಯ ತೊಂದರೆಗಳು ಕಂಡುಬಂದಲ್ಲಿ ಅಂತಹ ಪ್ರದೇಶದಲ್ಲಿ ಗಣಿಗಾರಿಕೆ ನಡೆಯದಂತೆ ಕ್ರಮಕೈಗೊಳ್ಳಲು ಸದರಿ ಸಮಿತಿಯು ಸಕ್ಷಮ ಪ್ರಾಧಿಕಾರವಾಗಿರುತ್ತದೆ. ಅಕ್ರಮ ಗಣಿಗಾರಿಕೆ/ಅನಧಿಕೃತ ಸಾಗಾಣಿಕೆ ತಡೆಗಟ್ಟಲು ರಾಜ್ಯ ಮಟ್ಟದಲ್ಲಿ, ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಹಾಗೂ ಜಿಲ್ಲಾಮಟ್ಟದಲ್ಲಿ ಆಯಾ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಟಾಸ್ಕ್‌ಫೋರ್ಸ್ ಸಮಿತಿಗಳನ್ನು ರಚಿಸಲಾಗಿದೆ.

ಆ) ಸರ್ಕಾರದ ಗಮನಕ್ಕೆ ಬಂದಿದೆ.

ಇ) ಅಕ್ರಮ ಮರಳು ಗಣಿಗಾರಿಕೆಯನ್ನು ತಡೆಯಲು ಜಿಲ್ಲಾಮಟ್ಟದ ಉಸ್ತುವಾರಿ ಸಮಿತಿಯನ್ನು ರಚಿಸಲಾಗಿದೆ. ಇದಲ್ಲದೆ ರಾಜ್ಯದಾದ್ಯಂತ 20 ತನಿಖಾ ಠಾಣೆಗಳನ್ನು ಸ್ಥಾಪಿಸಲಾಗಿದೆ.

ಈ) ಚಾಮರಾಜನಗರ ಜಿಲ್ಲೆಯಲ್ಲಿ ಪರವಾನಗಿ ಹೊಂದಿ ಮರಳು ಸಾಗಾಣಿಕೆ ಮಾಡುತ್ತಿರುವವರ ಸಂಖ್ಯೆ–4 ಪರವಾನಿಗೆ ಹೊಂದಿಲ್ಲದ ನಾಲ್ಕು ಪ್ರಕರಣಗಳಲ್ಲಿ ಪೊಲೀಸ್ ಠಾಣೆಯಲ್ಲಿ ಮೊಕದ್ದಮೆ ದಾಖಲಿಸಲಾಗಿದೆ.

ಉ) 2005–06ನೇ ಸಾಲಿನಲ್ಲಿ ಪರವಾನಗಿ ಇಲ್ಲದೆ ಸಾಗಾಣೆ ಮಾಡುತ್ತಿದ್ದವರ ವಿರುದ್ಧ 147 ದೂರುಗಳನ್ನು ದಾಖಲಿಸಲಾಗಿದೆ.

ಊ) 2005–06ರಲ್ಲಿ ರೂ. 1,06,33,957/– ಗಳ ದಂಡವನ್ನು ವಸೂಲಿ ಮಾಡಲಾಗಿದೆ.